## ಬೇಲೂರಿನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯದಲ್ಲಿ

ಸಿ.ಸಿ.ನಂ. 406-2022

| | | | |
|---|---|---|---|
| ಸಾಕ್ಷಿದಾರರ ಹೆಸರು | ಮಹಮ್ಮದ್ ಷಫೀ | P.W | 4 |
| ತಂದೆಯ ಹೆಸರು | ಅಬ್ದುಲ್ ರಹೀಂ | C.W | 5 |
| ವಯಸ್ಸು | 74 ವರ್ಷ | | |
| ಉದ್ಯೋಗ | ಅಂಗಡಿ ವ್ಯಾಪಾರ | ಪ್ರ.ವ.ಬೋ | |
| ವಾಸಸ್ಥಳ | ಬೇಲೂರು | ದಿನಾಂಕಃ 30-08-2023 | |

**ಮುಖ್ಯ ವಿಚಾರಣೆಃ- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ-**

ಆರೋಪಿತರನ್ನು ಈ ಹಿಂದೆ ನೋಡಿಲ್ಲ. ಅವರ ಪರಿಚಯ ಇಲ್ಲ ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಗಲಾಟೆಯನ್ನು ಕಣ್ಣಾರೆ ನೋಡಿರುತ್ತೇನೆ ಎಂದು ಪೋಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ. ನಿಪಿ **5** ರಿಂದ ನಿಪಿ **8** ಪೋಟೋಗಳಲ್ಲಿರುವ ವಾಹನಗಳನ್ನು ಈ ಹಿಂದೆ ನೋಡಿಲ್ಲ.

**ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ**

**ಪಾಟೀ ಸವಾಲುಃ ಮಾನ್ಯ ಸ ಸ ಅ ರವರಿಂದಃ**

ದಿಃ 01.03.2022 ರಂದು ಪೊಲೀಸರ ಮುಂದೆ ಹೇಳಿಕೆ ನೀಡಿ ನನ್ನ ಹೇಳಿಕೆಯಲ್ಲಿ ದಿಃ 28-02-2022 ರಂದು .......... ತಿಳಿಸಿದ್ದು ಇರುತ್ತದೆ ಎಂದು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ತನ್ನ ಹೇಳಿಕೆ ಅಂಶವನ್ನು ನಿರಾಕರಿಸಿದ್ದು ಅದನ್ನು ನಿಪಿ-9 ಎಂದು ಗುರುತಿಸಲಾಯಿತು. ನಿಪಿ-9 ರಂತೆ ಹೇಳಿಕೆ ನೀಡಿದ್ದರೂ ಕೂಡ ಮತ್ತು ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರೂ ಕೂಡ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ**

**ಮರುವಿಚಾರಣೆ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸ ಇ ಒ

ಸಾಕ್ಷಿ ಸಹಿ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ., ಬೇಲೂರು